ಓ ಎಸ್ ನಂ ಃ363/2016

ಪಿ. ಡಬ್ಲ್ಯೂ ಃ 1

ದಿಃ 9.08.2023 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.

ಮುಖ್ಯ ವಿಚಾರಣೆಃ ವಾದಿ ಪರ ಶ್ರೀ ಎಸ್ ಎಸ್ ಕೆ ವಕೀಲರಿಂದ

ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರಿಕೆ ಸಲ್ಲಿಸಿರುತ್ತೇನೆ. ಅದರಲ್ಲಿರುವ ಎಲ್ಲಾ ವಿಚಾರಗಳು ಸತ್ಯವಾಗಿರುತ್ತದೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ. ಸದರಿ ಪ್ರಮಾಣ ಪತ್ರಿಕೆಯನ್ನು ನನ್ನ ಮುಖ್ಯ ವಿಚಾರಣೆ ಎಂದು ತೆಗೆದುಕೊಳ್ಳಬೇಕು ಎಂದು ಕೋರುತ್ತೇನೆ.

ವಾದಿಗಳು ನನಗೆ ಬರೆದುಕೊಟ್ಟ ಅಧಿಕಾರಪತ್ರವನ್ನು ಕೊಟ್ಟಿದ್ದು ಅದನ್ನು ನಿ ಪಿ 1 ಎಂದು, ದಾವಾ ಸ್ವತ್ತಿಗೆ ಸಂಬಂಧಿಸಿದ 46 ಆರ್ ಟಿ ಸಿ ಗಳನ್ನು ಕೊಟ್ಟಿದ್ದು ಅವುಗಳನ್ನ ನಿ ಪಿ 2 ರಿಂದ ನಿ ಪಿ 47 ಎಂದು, ಮುನಿರಂಗಮ್ಮ ಇವರ ಆಧಾರ್ ಕಾರ್ಡ್ ನ್ನು ಕೊಟ್ಟಿದ್ದು ಅದನ್ನು ನಿ ಪಿ 48 ಎಂದು, ಮತದಾರರ ಗುರುತಿನ ಚೀಟಿಯನ್ನು ಕೊಟ್ಟಿದ್ದು ಅದನ್ನು ನಿ ಪಿ 49 ಎಂದು, ಬ್ಯಾಂಕ್ ಖಾತೆಯ ಪಾಸ್ ಬುಕ್ ನ್ನು ಕೊಟ್ಟಿದ್ದು ಅದನ್ನು ನಿ ಪಿ 50 ಎಂದು, 12 ಆರ್ ಟಿ ಸಿ ಗಳನ್ನು ಕೊಟ್ಟಿದ್ದು ಅವುಗಳನ್ನು ನಿ ಪಿ 51 ರಿಂದ ನಿ ಪಿ 62 ಎಂದು, ಎ ಂ ಆರ್ ಹೆಚ್ 21, ಹೆಚ್ 6, ಹೆಚ್ 14 ಇವುಗಳ ದೃಢೀಕೃತ ಪ್ರತಿಗಳನ್ನು ಕೊಟ್ಟಿದ್ದು ಅವುಗಳನ್ನು ನಿ ಪಿ 63 ರಿಂದ ನಿ ಪಿ 65 ಎಂದು, 2023-24 ನೆ ಸಾಲಿನ ಆರ್ ಟಿ ಸಿ ಗಳನ್ನು ಕೊಟ್ಟಿದ್ದು ಅವುಗಳನ್ನು ನಿ ಪಿ 66 ರಿಂದ ನಿ ಪಿ 68 ಎಂದು ಗುರುತಿಸಲಾಯಿತು. ದಾವೆಯಲ್ಲಿ ಕೋರಿರುವಂತೆ ವಾದಿಗಳ ದಾವೆಯನ್ನು ಡಿಕ್ರಿ ಮಾಡಿಕೊಡಬೇಕೆಂದು ಕೋರಿಕೊಳ್ಳುತ್ತೇನೆ.

ಪಾಟೀ ಸವಾಲಿಗಾಗಿ ಕಾಲಾವಕಾಶ ಕೋರಿದ್ದು, ಕೋರಿಕೆಯ ಮೇರೆಗೆ ಮುಂದೂಡಲಾಯಿತು.

(ಉಖ್ತ ಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಓ

ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರು,

ಮಾಗಡಿ.